ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು

ಸಂಖ್ಯೆ:ಜಿ.ಎಲ್.13/110/2022–23

ದಿನಾಂಕ 16–08–2025

ಇವರಿಗೆ:

1. ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು ಮತ್ತು ಸಂಯೋಜನಾಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
2. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಘಟಕ/ಸ್ವಾಯತ್ತ ಹಾಗೂ ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.

ಮಾನ್ಯರೆ,

ವಿಷಯ: ಪ್ರಾರ್ಥನಾ ಸಮಯದಲ್ಲಿ ಸಂವಿಧಾನ ಪೀಠಿಕೆಯನ್ನು ವಿದ್ಯಾರ್ಥಿಗಳು ಹಾಗೂ ಅಧ್ಯಾಪಕರು ಓದುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ, ಬೆಂಗಳೂರು, ಇವರ ಟಿಪ್ಪಣಿ ಸಂಖ್ಯೆ:ಸಕಇ/232/ಸಪ್ರಕಾ/2025, ದಿನಾಂಕ 20.06.2025.

2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ, ಬೆಂಗಳೂರು, ಇವರ ಪತ್ರದ ಸಂಖ್ಯೆ:ಇಡಿ 191 ವಿವಿಧ 2025, ದಿನಾಂಕ 01.08.2025.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ ಟಿಪ್ಪಣಿ 01ರ ಪ್ರಕಾರ ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಎಲ್ಲಾ ವಿಭಾಗಗಳಲ್ಲಿ ಪ್ರಾರ್ಥನಾ ಸಮಯದಲ್ಲಿ ಸಂವಿಧಾನ ಪೀಠಿಕೆಯನ್ನು ವಿದ್ಯಾರ್ಥಿಗಳು ಹಾಗೂ ಅಧ್ಯಾಪಕರು ಓದುವುದು ಮತ್ತು ಸಂವಿಧಾನ ಪೀಠಿಕೆಯ ಭಾವಚಿತ್ರವನ್ನು ಎದ್ದುಕಾಣುವಂತೆ ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಪ್ರದರ್ಶಿಸುವಂತೆ ಕ್ರಮ ಕೈಗೊಳ್ಳಬೇಕೆಂದು ದಿನಾಂಕ.10.07.2025ರಂದು ಹೊರಡಿಸಿದ್ದ ವಿ.ವಿ. ಸುತ್ತೋಲೆಯಲ್ಲಿ ತಿಳಿಸಲಾಗಿತ್ತು.

ಆದರೆ ಉಲ್ಲೇಖ 02ರ ಸರ್ಕಾರಿ ಪತ್ರದನ್ವಯ ಕ್ರಮಕೈಗೊಳ್ಳದಿದ್ದಲ್ಲಿ ಕಡ್ಡಾಯವಾಗಿ ಸಂವಿಧಾನ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಲು ಪ್ರತಿಜ್ಞೆಯುವುದು ಹಾಗೂ ಸಂವಿಧಾನ ಪೀಠಿಕೆಯ ಭಾವಚಿತ್ರವನ್ನು ಎದ್ದುಕಾಣುವಂತೆ ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಪ್ರದರ್ಶಿಸಲು ಕ್ರಮ ಕೈಗೊಳ್ಳಬೇಕೆಂದು ಮತ್ತೊಮ್ಮೆ ತಿಳಿಸಲಾಗಿದೆ (ಸಂವಿಧಾನ ಪೀಠಿಕೆಯ ಕನ್ನಡ ಮತ್ತು ಆಂಗ್ಲ ಭಾಷೆಯ ಪ್ರತಿ ಲಗತ್ತಿಸಿದೆ).

18/8/2025

ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು-570 005

ಪ್ರತಿ:

1. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
2. ಕುಲಸಚಿವರು(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಸಂಯೋಜಕರು, ಐ.ಡಿ.ಸಿ. ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು–ಇವರಿಗೆ ಸದರಿ ಪತ್ರವನ್ನು ಹಾಗೂ ಸಂವಿಧಾನ ಪೀಠಿಕೆಯ ಕನ್ನಡ ಮತ್ತು ಆಂಗ್ಲ ಭಾಷೆಯ ಪ್ರತಿಯನ್ನು ಮೈಸೂರು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.
4. ಮಾನ್ಯ ಕುಲಪತಿಯವರ/ಕುಲಸಚಿವರು/ಕುಲಸಚಿವರು(ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಕಛೇರಿ ಪ್ರತಿ.

# ಭಾರತದ ಸಂವಿಧಾನ

## ಪೀಠಿಕೆ

ಭಾರತದ ಜನತೆಯಾದ ನಾವು,
ಭಾರತವನ್ನು ಸಾರ್ವಭೌಮ, ಸಮಾಜವಾದಿ, ಧರ್ಮನಿರಪೇಕ್ಷ
ಪ್ರಜಾಸತ್ತಾತ್ಮಕ ಗಣರಾಜ್ಯವನ್ನಾಗಿ
ರೂಪಿಸುವುದಕ್ಕಾಗಿ;
ಭಾರತದ ಎಲ್ಲಾ ಪ್ರಜೆಗಳಿಗೆ
ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯವನ್ನು;
ವಿಚಾರ, ಅಭಿವ್ಯಕ್ತಿ, ನಂಬಿಕೆ, ಧರ್ಮ ಮತ್ತು
ಉಪಾಸನೆಯ ಸ್ವಾತಂತ್ರ್ಯವನ್ನು;
ಸ್ಥಾನಮಾನ ಮತ್ತು ಅವಕಾಶಗಳ ಸಮಾನತೆಯನ್ನು
ದೊರೆಯುವಂತೆ ಮಾಡುವುದಕ್ಕಾಗಿ;
ವ್ಯಕ್ತಿಗೌರವ, ದೇಶದ ಏಕತೆ ಮತ್ತು ಸಮಗ್ರತೆಗಾಗಿ ಎಲ್ಲರಲ್ಲಿ
ಭ್ರಾತೃತ್ವ ಭಾವನೆಯನ್ನು ಮೂಡಿಸುವುದಕ್ಕೆ
ದೃಢಸಂಕಲ್ಪ ಮಾಡಿ,
ನಮ್ಮ ಸಂವಿಧಾನ ಸಭೆಯಲ್ಲಿ
1949ನೆಯ ಇಸವಿಯ ನವೆಂಬರ್ ತಿಂಗಳ 26ನೇ ದಿನದಂದು
ಈ ಸಂವಿಧಾನವನ್ನು ನಮಗೆ ನಾವೇ ಅರ್ಪಿಸಿಕೊಂಡು
ಅಂಗೀಕರಿಸಿ, ಶಾಸನವಾಗಿ ವಿಧಿಸಿಕೊಂಡಿದ್ದೇವೆ.

# THE CONSTITUTION OF INDIA

## PREAMBLE

WE, THE PEOPLE OF INDIA,
having solemnly resolved to constitute India into a
SOVEREIGN SOCIALIST
SECULAR DEMOCRATIC REPUBLIC
and to secure to all its citizens:
JUSTICE, social, economic and political;
LIBERTY of thought, expression,
belief, faith and worship;
EQUALITY of status and of opportunity;
and to promote among them all
FRATERNITY assuring the dignity of the
individual and the unity and
integrity of the Nation;
IN OUR CONSTITUENT ASSEMBLY
this twenty-sixth day of November, 1949, do
HEREBY ADOPT, ENACT AND GIVE TO
OURSELVES THIS CONSTITUTION.